# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಶ್ರೀ ಎನ್. ರಾಮಮೂರ್ತಿ, ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ಕ್ರಮ ಜರುಗಿಸುವ ಬಗ್ಗೆ – ಆದೇಶ.

ಓದಲಾಗಿದೆ:

1. ಮಾನ್ಯ ಗ್ರಾ.ಅ.&ಪಂ.ರಾಜ್ ಸಚಿವರ ಟಿಪ್ಪಣಿ ಸಂಖ್ಯೆ: ಗ್ರಾಪಂರಾಸ/ಟಿ/ 3458/2016-17.
2. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತಿ ಇವರ ಪ.ಸಂ. ಬೆಂಗ್ರಾಜಿಪಂ/ಸಿ1/ಪಿಡಿಓ46/2016-17, ದಿನಾಂಕ:25.01.2017.
3. ಸಹಾಯಕ ಕಾರ್ಯದರ್ಶಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತಿ ಇವರ ತನಿಖಾ ವರದಿ, ದಿನಾಂಕ 25.01.2017
4. ಸಮಸಂಖ್ಯೆಯ ಕಾರಣ ಕೇಳುವ ನೋಟೀಸ್, ದಿನಾಂಕ 27.02.2017
5. ಸಮಸಂಖ್ಯೆಯ ವಿಚಾರಣೆಗೆ ಹಾಜರಾಗಲು ತಿಳುವಳಿಕೆ ಪತ್ರ, ದಿನಾಂಕ12.05.2017.
6. ಶ್ರೀ ಎನ್. ರಾಮಮೂರ್ತಿ, ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳು ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರ ಲಿಖಿತ ಹೇಳಿಕೆ ದಿನಾಂಕ:12-04-2017 ಮತ್ತು 10-04-2017.
7. ದೇವನಹಳ್ಳಿ ತಾಲ್ಲೂಕು, ವಿಶ್ವನಾಥಪುರ ಗ್ರಾಮ ಪಂಚಾಯತಿಯ ದಿನಾಂಕ 08.01.2016 ರ ಸಾಮಾನ್ಯ ಸಭೆಯ ಸೂಚನಾ ಪತ್ರ, ದಿನಾಂಕ 04.01.2016
8. ದೇವನಹಳ್ಳಿ ತಾಲ್ಲೂಕು, ವಿಶ್ವನಾಥಪುರ ಗ್ರಾಮ ಪಂಚಾಯತಿಯ ದಿನಾಂಕ 08.01.2016 ರ ನಿರ್ಣಯ ಸಂಖ್ಯೆ: 8 ಮತ್ತು ದಿನಾಂಕ 11.03.2016 ಮತ್ತು 28.06.2016 ರ ನಿರ್ಣಯ ಸಂಖ್ಯೆ: 9
9. ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 76 ವಿಸೇಬಿ 2017, ದಿನಾಂಕ 17.04.2017
10. ಅನಧಿಕೃತ ಟಿಪ್ಪಣಿ ಸಂಖ್ಯೆ: ಗ್ರಾಅಪ 76 ವಿಸೇಬಿ 2017, ದಿನಾಂಕ 06.05.2017

ಪ್ರಸ್ತಾವನೆ:

ಮೇಲೆ ಓದಲಾದ (1) ರಲ್ಲಿ ಕಾರ್ಯಾಧ್ಯಕ್ಷರು, ಕರ್ನಾಟಕ ಪಂಚಾಯತ್ ಪರಿಯತ್ ರಾಜ್ ಪರಿಷತ್, ಶೇಷಾದ್ರಿಪುರಂ, ಬೆಂಗಳೂರು ಇವರು ಬೆಂಗಳೂರು ಗ್ರಾಮಾಂತರ ಜಿಲ್ಲೆ ದೇವನಹಳ್ಳಿ ತಾಲ್ಲೂಕು ವಿಶ್ವನಾಥಪುರ ಗ್ರಾಮ ಪಂಚಾಯತಿಯಲ್ಲಿನ ವಸತಿ ಬಡಾವಣೆಗಳಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಿದ ನಿವೇಶನಗಳಿಗೆ ಸಂಬಂಧಿಸಿದಂತೆ ಕಾನೂನು ಬಾಹಿರವಾಗಿ ಭೋಗ್ಯ/ಕ್ರಯ ಪತ್ರವನ್ನು ನೊಂದಾಯಿಸಿಕೊಟ್ಟಿರುವ ಬಗ್ಗೆ ಸಂಬಂಧಪಟ್ಟವರ ವಿರುದ್ಧ ಕಾನೂನು ಕ್ರಮ ಕೈಗೊಳ್ಳುವಂತೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಚಿವರನ್ನು ಕೋರಿದ್ದು, ಈ ಬಗ್ಗೆ ಪರಿಶೀಲಿಸಿ ಕ್ರಮ ಕೈಗೊಳ್ಳುವಂತೆ ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ಸಚಿವರು ಸೂಚಿಸಿರುತ್ತಾರೆ.

ಮೇಲೆ ಓದಲಾದ (2) ರಲ್ಲಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತಿ ಪ್ರಕರಣದ ಕುರಿತು ಸಹಾಯಕ ಕಾರ್ಯದರ್ಶಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತಿ ರವರು ಸಲ್ಲಿಸಿರುವ ತನಿಖಾ ವರದಿಯನ್ವಯ ವಸತಿ ಬಡಾವಣೆಗಳಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಿದ ನಿವೇಶನಗಳನ್ನು ಭೋಗ್ಯಕ್ಕೆ ನೀಡಿರುವ ಕ್ರಮವು ನಿಯಮಬಾಹಿರವಾಗಿದ್ದು, ಸದರಿ ಗ್ರಾಮ ಪಂಚಾಯತಿಯ ಅಧ್ಯಕ್ಷರು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿ ವಿರುದ್ಧ ಕ್ರಮ ಜರುಗಿಸುವಂತೆ ಶಿಫಾರಸ್ಸು ಮಾಡಿರುತ್ತಾರೆ.

ಮೇಲೆ ಓದಲಾದ (3) ರಲ್ಲಿ ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ರನ್ವಯ ಕ್ರಮ ಜರುಗಿಸಿ, ಗ್ರಾಮ ಪಂಚಾಯತಿ ಸದಸ್ಯ ಸ್ಥಾನದಿಂದ ಏಕೆ ತೆಗೆದು ಹಾಕಬಾರದು ಎಂಬುದರ ಬಗ್ಗೆ 15 ದಿನಗಳೊಳಗಾಗಿ ವಿವರಣೆ ನೀಡುವಂತೆ ಸದರಿ ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಮತ್ತು ಸದಸ್ಯರುಗಳಿಗೆ ಕಾರಣ ಕೇಳುವ ನೋಟೀಸನ್ನು ಜಾರಿಗೊಳಿಸಲಾಗಿತ್ತು.

ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ವಿಶ್ವನಾಥಪುರ ಗ್ರಾಮ ಪಂಚಾಯಿತಿ, ಅಧ್ಯಕ್ಷರಾದ ಶ್ರೀ ರಾಮಮೂರ್ತಿ, ಮತ್ತು ಉಪಾಧ್ಯಕ್ಷರಾದ ಶ್ರೀಮತಿ ರಮಾದೇವಿ ರವರು ಕಾರಣ ಕೇಳುವ ನೋಟೀಸಿಗೆ ಸಲ್ಲಿಸಿರುವ ಉತ್ತರ ಈ ಕೆಳಕಂಡಂತಿದೆ.

We would like to inform you that our village panchayath members namely Sri S.Anjinappa, Sri S.Narsimharaju, Smt.Latha, Smt.H.S.Asha, Smt.Laksh;mamma, Smt.B.R.Radha, Smt.Jayamma, Sri Subramani and Sri Narayanaswamy have also received the show cause notice issued by your goodself authority and we came to know that they have also answered for the same by their letters. We would like to inform you that so far as it concerned to passing of the resolution with regard to lease of CA sites measuring 4414 Sq. Meters situate at Bommawara Village and Bandaramanahalli survey numbers for construction of a club house in our village panchayath meeting dt.8-01-2016, 11-03-2016 and 28-6-2016 resolving for lease of the same in favour of Fortis Land Developers LLP. For conducting Minutes of the Meeting and to pass the resolution, the PDO of village panchayath has served meeting notice on all the village panchayath members including ourselves and in the agenda of the meeting dt.8-01-2016, 11-03-2016 and 28-6-2016 there is a reference in the subject with regard to lease of the said property in favour of Fortis Land Developers LLP. all the members of our village panchayath have acknowledged the receipt of the meeting notice and all of the meeting notices and all of them including Anjinappa and others referred supra were participated in the meeting proceedings. There afterwards all of us unanimously decided to lease the said premises in favour of Fortis Land Developers LLP. and accordingly we have passed the resolution unanimously, there was no objection from any of the village panchayath member while passing the resolution. After passing of the resolution all the village panchayath members including ourselves being the President and Vice-President have signed the resolution book prepared by the PDO. Now we came to know that while answering to the notice issued by the your goodself authority, the said Anjinappa and other eight persons have made false statements in their reply, even though they have participated in the meeting and have unanimously agreed to pass the resolution for leasing of the premises in favour of Fortis Land Developers LLP. We the President and Vice-President, so also other village panchayath members totally consisting of 12 persons have been elected through Janatha Dal Party, in view of the fact that we the JD(S) party panchayath members are in majority in our village panchayath elected body. the President and Vice-President posts are given to our party ;and that our party is ruling our village panchayath. The congress supported members with a malafide intention to tarnish the image of ourselves and our members elected from the support of JD(S) and since we the President and Vice-President, the said members have made false, frivolous and untenable allegations.

Under the facts and circumstances stated above, we request your goodself authority to consider all the aspects and to drop further proceedings initiated against us, our village panchayath members, much less the PDO as they have not committed any mistake nor misused and powers conferred on us under the provisions of the

the CA sites referred in the show cause notice are all for bonafide reasons and development of our village panchayath to augment its income and we have not exceeded our powers in any manner hence the allegations made by the above members in their reply letters are all false and far from truth and thus the same cannot be accepted by your goodself authority while taking decision on the matter.

ಸದರಿ ಗ್ರಾಮ ಪಂಚಾಯಿತಿ ಸದಸ್ಯರುಗಳು ಕಾರಣ ಕೇಳುವ ನೋಟೀಸಿಗೆ ಉತ್ತರವನ್ನು ಸಲ್ಲಿಸಿ, ದಿನಾಂಕ:08-01-2016 ಮತ್ತು 11-03-2016 ರಂದು ನಡೆದ ವಿಶೇಷ ಹಾಗೂ ಸಾಮಾನ್ಯ ಸಭೆಗೆ ಹಾಜರಾಗಲು ತಮಗೆ ನೀಡಿರುವ ನೋಟೀಸಿನಲ್ಲಿ ಚರ್ಚಿಸಬೇಕಾದ ವಿಷಯಗಳ ಪಟ್ಟಿಯಲ್ಲಿ Fortius Developers LLP ಸಂಸ್ಥೆಯವರು ಗ್ರಾಮ ಪಂಚಾಯಿತಿಗೆ ದಿ:02-01-2016ರಂದು ನೀಡಿರುವ ಮನವಿಯ ಬಗ್ಗೆ ನಮೂದು ಮಾಡಿರುವುದಿಲ್ಲ. ಅದರಂತೆ ಸದರಿ ವಿಷಯದ ಸಂಬಂಧ ಮೇಲೆ ಹೇಳಿದ ಎರಡೂ ದಿನಾಂಕಗಳ ಸಭೆಗಳಲ್ಲಿ ಯಾವುದೇ ಚರ್ಚೆ ನಡೆದು ನಿರ್ಣಯ ಕೈಗೊಂಡಿರುವುದಿಲ್ಲ. ಇದಲ್ಲದೇ ಹಿಂದೆ ನೊಂದಾಯಿತ ಪರಿತ್ಯಾಜನ ಪತ್ರದಡಿಯಲ್ಲಿ ಭಂಡರಾಮನಹಳ್ಳಿ ಗ್ರಾಮದ ಸ.ನಂ.12ರಲ್ಲಿ ನೀಡಿರುವ ಸಿ.ಎ. ನಿವೇಶನವು ತಮ್ಮ ಪಂಚಾಯಿತಿ ವ್ಯಾಪ್ತಿಗೆ ಒಳಪಡುವ ಅಥವಾ ಒಳಪಡದೇ ಇರುವ ವಿಚಾರವಾಗಲೀ ಹಾಗೂ ಸದರಿ ಸಿ.ಎ. ನಿವೇಶನದ ಖಾತೆಯನ್ನು ವಿಶ್ವನಾಥಪುರ ಗ್ರಾಮ ಪಂಚಾಯಿತಿಯಲ್ಲಿ ಮಾಡುವ ಬಗ್ಗೆಯಾಗಲೀ ಈ ಹಿಂದೆ ನಡೆದ ಯಾವುದೇ ಪಂಚಾಯಿತಿ ಸಾಮಾನ್ಯ ಹಾಗೂ ವಿಶೇಷ ಸಭೆಗಳಲ್ಲಿ ಚರ್ಚಿಸಿ ನಿರ್ಣಯ ಕೈಗೊಂಡಿರುವುದಿಲ್ಲವೆಂದು ತಿಳಿಸಿರುತ್ತಾರೆ.

ಮೇಲೆ ಓದಲಾದ (4) ರನ್ವಯ ಪ್ರಕರಣಕ್ಕೆ ಸಂಬಂಧಿಸಿದಂತೆ ದಿನಾಂಕ 14.06.2017 ಮತ್ತು 24-07-2017 ರಂದು ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ರವರ ನ್ಯಾಯಾಲಯದಲ್ಲಿ ಪ್ರಕರಣದ ವಿಚಾರಣೆ ನಡೆಸಲಾಗಿದೆ.

ಕಡತದಲ್ಲಿನ ಅಂಶಗಳನ್ನು, ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಸಲ್ಲಿಸಿರುವ ತನಿಖಾ ವರದಿ, ದಾಖಲಾತಿಗಳು ಹಾಗೂ ಲಿಖಿತ ಹೇಳಿಕೆಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ ಕೆಳಗಿನ ಅಂಶಗಳು ಕಂಡುಬರುತ್ತವೆ.

1. ಬೆಂಗಳೂರು ಗ್ರಾಮಾಂತರ ಜಿಲ್ಲೆ, ದೇವನಹಳ್ಳಿ ತಾಲ್ಲೂಕು, ವಿಶ್ವನಾಥಪುರ ಗ್ರಾಮ ಪಂಚಾಯತಿಯು ಬೆಂಗಳೂರು ಅಂತರಾಷ್ಟ್ರೀಯ ವಿಮಾನ ನಿಲ್ದಾಣ ಪ್ರದೇಶ ಯೋಜನಾ ಪ್ರಾಧಿಕಾರದ ವ್ಯಾಪ್ತಿಗೆ ಬರುತ್ತದೆ.
2. ವಿಶ್ವನಾಥಪುರ ಗ್ರಾಮ ಪಂಚಾಯತಿಗೆ ಸೇರಿದ ಸ.ನಂ.64 ಮತ್ತು ಅಣ್ಣೇಶ್ವರ ಗ್ರಾಮ ಪಂಚಾಯತಿಗೆ ಸೇರಿದ ಸ.ನಂ.12 ರಲ್ಲಿ ವಸತಿ ಬಡಾವಣೆಯನ್ನು ಅಭಿವೃದ್ಧಿಪಡಿಸಿದ್ದು, ನಾಗರೀಕ ಸೌಲಭ್ಯಕ್ಕಾಗಿ ಸಿ.ಎ1(30.32 ಗುಂಟೆ) ಹಾಗೂ ಸಿ.ಎ2(13.30 ಗುಂಟೆ) ಪ್ರದೇಶವನ್ನು ಕಾಯ್ದಿರಿಸಲಾಗಿತ್ತು ಹಾಗೂ ಈ ಸಂಬಂಧ ಈ ನಿವೇಶನಗಳನ್ನು ವಿಶ್ವನಾಥಪುರ ಗ್ರಾಮ ಪಂಚಾಯತಿಗೆ ದಿನಾಂಕ:20-03-2010 ರ ಪತ್ರದಲ್ಲಿ ವಹಿಸಿ ನೊಂದಣಿ ಮಾಡಲಾಗಿತ್ತು.
3. ಶ್ರೀ ರಾಜಾರಾವ್ ಎಂಬುವರು ದಿನಾಂಕ:02-01-2016 ರಂದು ವಿಶ್ವನಾಥಪುರ ಗ್ರಾಮ ಪಂಚಾಯತಿಗೆ ಮನವಿ ಸಲ್ಲಿಸಿ, ತಾವು ಈ ಹಿಂದೆ 20-03-2010 ರಂದು ಗ್ರಾಮ ಪಂಚಾಯತಿಗೆ ನೊಂದಾಯಿಸಿ ಕೊಟ್ಟಿರುವ ನಿವೇಶನಗಳನ್ನು ಮೆ॥ ಫೋರ್ಟಿಸ್ ಲ್ಯಾಂಡ್ ಡೆವಲಪರ್ಸ್ ರವರಿಗೆ ಕ್ಲಬ್ ಹೌಸ್ ನಿರ್ಮಿಸುವ ಉದ್ದೇಶಕ್ಕಾಗಿ ಭೋಗ್ಯದ ಆಧಾರದ ಮೇಲೆ ನೀಡಬೇಕೆಂದು ಕೋರಿರುತ್ತಾರೆ.
4. ವಿಶ್ವನಾಥಪುರ ಗ್ರಾಮ ಪಂಚಾಯತಿಯು ದಿನಾಂಕ:01-08-2016 ರ ಸಾಮಾನ್ಯ ಸಭೆಯಲ್ಲಿ ಚರ್ಚಿಸಿ, ಸದರಿ ನಿವೇಶನಗಳನ್ನು ಕ್ಲಬ್ ಹೌಸ್ ನಿರ್ಮಿಸಲು ಗುತ್ತಿಗೆ ಆಧಾರದ ಮೇಲೆ ಮೆ॥ ಫೋರ್ಟಿಸ್ ಲ್ಯಾಂಡ್ ಡೆವಲಪರ್ಸ್ ರವರಿಗೆ ಹಸ್ತಾಂತರಿಸಲು ಸರ್ವಾನುಮತದಿಂದ ತೀರ್ಮಾನಿಸಿ, ಈ ಸಂಬಂಧ ತಾಲ್ಲೂಕು ಪಂಚಾಯತಿ ಕಾರ್ಯನಿರ್ವಾಹಕ ಅಧಿಕಾರಿ ರವರ ಅನುಮತಿ ಪಡೆಯುವಂತೆ ನಿರ್ಣಯಿಸಿರುತ್ತಾರೆ ಹಾಗೂ ಮೆ॥ ಫೋರ್ಟಿಸ್ ಲ್ಯಾಂಡ್ ಡೆವಲಪರ್ಸ್ ರವರಿಗೆ ಕ್ಲಬ್ ಹೌಸ್ ನಿರ್ಮಿಸುವ ಉದ್ದೇಶಕ್ಕಾಗಿ ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಿದ ನಿವೇಶನವನ್ನು ನೀಡಿರುವ ಭೋಗ್ಯದ ಕರಾರನ್ನು ದಿನಾಂಕ 15.09.2016 ರಂದು ಮಾಡಲಾಗಿರುತ್ತದೆ.
5. ಆದರೆ ಸ.ನಂ.12 ರಲ್ಲಿನ ನಿವೇಶನ ಅಣ್ಣೇಶ್ವರ ಗ್ರಾಮ ಪಂಚಾಯಿತಿ ವ್ಯಾಪ್ತಿಯ ಭಂಡರಾಮನಹಳ್ಳಿಗೆ ಸೇರಿರುತ್ತದೆ. ಈ ನಿವೇಶನದ ಬಗ್ಗೆ ವಿಶ್ವನಾಥಪುರ ಗ್ರಾಮ ಪಂಚಾಯತಿಯು ಅಧಿಕಾರ ವ್ಯಾಪ್ತಿಯನ್ನು ಹೊಂದಿಲ್ಲವಾದರೂ ನಿರ್ಣಯ ಕೈಗೊಂಡಿರುವುದು ನಿಯಮಬಾಹಿರವಾಗಿರುತ್ತದೆ.

ಸಾರ್ವಜನಿಕರಿಗೆ ಯಾವುದೇ ಪ್ರಯೋಜನವಿಲ್ಲದೆ, ಒತ್ತುವರಿಯಾಗುವುದನ್ನು ತಡೆಗಟ್ಟುವ ಉದ್ದೇಶದಿಂದ ಕ್ಲಬ್ ಹೌಸ್ ನಿರ್ಮಾಣ ಮಾಡಲು ಗುತ್ತಿಗೆ ಆಧಾರದ ಮೇಲೆ ಕರಾರು ಪತ್ರ ಮಾಡುವಂತೆ" ತಿಳಿಸಿರುತ್ತಾರೆ. ಈ ಕ್ರಮವು ಸಹ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯಿಂದ ಚರ ಹಾಗೂ ಸ್ಥಿರಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) ನಿಯಮಗಳು 1996 ರನ್ನು ಉಲ್ಲಂಘಿಸಿದಂತಾಗಿದೆ. ಗ್ರಾಮ ಪಂಚಾಯತಿಯ ನಿರ್ಣಯದ ಬಗ್ಗೆ ತಾಲ್ಲೂಕು ಪಂಚಾಯತಿಯ ಸಭೆಯಲ್ಲಿ ನಿರ್ಣಯ ಕೈಗೊಂಡು ತದನಂತರ ಗ್ರಾಮ ಪಂಚಾಯಿತಿಯ ನಿರ್ಣಯಕ್ಕೆ ಅನುಮೋದನೆ ನೀಡುವ/ನಿರಾಕರಿಸುವ ಅಧಿಕಾರ ತಾಲ್ಲೂಕು ಪಂಚಾಯತಿಯದಾಗಿರುತ್ತದೆ. ಈ ನಿಯಮಗಳನ್ವಯ ಕ್ಲಬ್ ಹೌಸ್ ನಿರ್ಮಾಣ ಮಾಡಲು ಗುತ್ತಿಗೆ ಆಧಾರದ ಮೇಲೆ ಕರಾರು ಪತ್ರ ಮಾಡುವಂತೆ ತಿಳಿಸಿರುವ ಕಾರ್ಯನಿರ್ವಾಹಕ ಅಧಿಕಾರಿಗಳು, ದೇವನಹಳ್ಳಿ ತಾಲ್ಲೂಕು ಪಂಚಾಯತಿ ರವರ ಕ್ರಮವು ಕಾನೂನುಬಾಹಿರವಾಗಿರುತ್ತದೆ.

7. ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 209 ಹಾಗೂ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯಿಂದ ಚರ ಹಾಗೂ ಸ್ಥಿರ ಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) ನಿಯಮಗಳು 1996 ರನ್ವಯ ವಿಶ್ವನಾಥಪುರ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆ ನಿರ್ಣಯಕ್ಕೆ, ತಾಲ್ಲೂಕು ಪಂಚಾಯತಿಯಯ ಅನುಮೋದನೆ ಪಡೆಯದೆ ವಿಶ್ವನಾಥಪುರ ಗ್ರಾಮ ಪಂಚಾಯಿತಿಯು ಸ.ನಂ.64 ಮತ್ತು ಸ.ನಂ.12 ರಲ್ಲಿನ ಸ್ವತ್ತನ್ನು ಮೆ॥ ಫೋರ್ಟಿಸ್ ಲ್ಯಾಂಡ್ ಡೆವಲಪರ್ಸ್ ರವರಿಗೆ ಗುತ್ತಿಗೆ ಆಧಾರದ ಮೇಲೆ ವರ್ಗಾವಣೆ ಮಾಡಿರುವ ಕ್ರಮವು ಅಸಿಂಧುವಾಗಿರುತ್ತದೆ.

8. ಅಲ್ಲದೆ, ವಿಶ್ವನಾಥಪುರ ಗ್ರಾಮ ಪಂಚಾಯತಿಯ ಸಾಮಾನ್ಯ ಸಭೆ ದಿನಾಂಕ 08.01.2016 ರ ನಿರ್ಣಯ ಸಂಖ್ಯೆ: 8 ಮತ್ತು ದಿನಾಂಕ 11.03.2016 ಮತ್ತು 28.06.2016 ರ ನಿರ್ಣಯ ಸಂಖ್ಯೆ: 9 ರಲ್ಲಿ ಸ.ನಂ.64 ಮತ್ತು ಸ.ನಂ.12 ರಲ್ಲಿನ ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಿದ ಸ್ವತ್ತನ್ನು ಮೆ॥ ಫೋರ್ಟಿಸ್ ಲ್ಯಾಂಡ್ ಡೆವಲಪರ್ಸ್ ರವರಿಗೆ ಗುತ್ತಿಗೆ ಆಧಾರದ ಮೇಲೆ ಭೋಗ್ಯಕ್ಕೆ ನೀಡಿರುವುದಾಗಿ ನಿರ್ಣಯ ಕೈಗೊಂಡಿರುತ್ತಾರೆ. ಆದರೆ, ಕರ್ನಾಟಕ ಪಂಚಾಯತ್ (ಗ್ರಾಮ ಪಂಚಾಯತಿ ಸಭೆಗಳ ಕಾರ್ಯವಿಧಾನ) ನಿಯಮಗಳು, 1994 ರ ನಿಯಮ 4(3) ರನ್ವಯ ಯಾವುದೇ ಪ್ರಸ್ತಾವವನ್ನು ಯಾವುದೇ ಸಾಮಾನ್ಯ ಸಭೆಯನ್ನು ಕರೆಯುವ ನೋಟೀಸಿನಲ್ಲಿ ನಮೂದಿಸಿರುವ ಹೊರತು ಅಂಥ ಯಾವುದೇ ಸಾಮಾನ್ಯ ಸಭೆಯಲ್ಲಿ ಮತ್ತು ವಿಶೇಷ ಸಭೆಯ ಸಂಬಂಧದಲ್ಲಿ ಅಂಥ ಸಭೆಗಿನ ಲಿಖಿತ ಕೋರಿಕೆಯಲ್ಲಿ ನಮೂದಿಸಿರುವ ಹೊರತು ಅದನ್ನು ಚರ್ಚಿಸತಕ್ಕದ್ದಲ್ಲ ಎಂದಿರುತ್ತದೆ. ಆದುದರಿಂದ, ಸಾಮಾನ್ಯ ಸಭೆಯ ಅಜೆಂಡಾದಲ್ಲಿ ಈ ವಿಷಯವು ಇಲ್ಲದೆ ಇರುವುದರಿಂದ ಚರ್ಚಿಸಿ ನಿರ್ಣಯ ಕೈಗೊಂಡಿರುವ ಕ್ರಮವು ಅಸಿಂಧುವಾಗುತ್ತದೆ.

ಪ್ರಕರಣದಲ್ಲಿ ಭಾಗಿಯಾದ ವಿಶ್ವನಾಥಪುರ ಗ್ರಾಮ ಪಂಚಾಯತಿಯ ಅಂದಿನ ಪಂಚಾಯತಿ ಅಭಿವೃದ್ಧಿ ಅಧಿಕಾರಿಯಾದ ಶ್ರೀ ಕೃಷ್ಣಪ್ಪ ಮತ್ತು ಶ್ರೀ ಎನ್.ಆರ್ ಉಮೇಶ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ದೇವನಹಳ್ಳಿ ಪ್ರಸ್ತುತ ಕಾರ್ಯನಿರ್ವಾಹಕ ಅಧಿಕಾರಿ, ತಾಲ್ಲೂಕು ಪಂಚಾಯತ್, ಬೆಂಗಳೂರು ಉತ್ತರ ಇವರುಗಳ ವಿರುದ್ಧ ಕರ್ನಾಟಕ ನಾಗರೀಕ ಸೇವಾ(ವನಿಮೇ) ನಿಯಮಾವಳಿಗಳು 1957ರ ನಿಯಮ 10(1)(ಡಿ)ರ ಅನುಸಾರ ಅವರ ವಿರುದ್ಧದ ಆರೋಪಗಳ ಕುರಿತಂತೆ ತನಿಖೆ/ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ ಸೇವೆಯಿಂದ ಮೇಲೆ ಓದಲಾದ (8) ರಲ್ಲಿ ಅಮಾನತ್ತು ಮಾಡಲಾಗಿದೆ.

ದಾಖಲಾತಿಗಳನ್ನು ಹಾಗೂ ವಾಸ್ತವಾಂಶಗಳನ್ನು ಕೂಲಂಕುಷವಾಗಿ ಪರಿಶೀಲಿಸಲಾಗಿ, ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 209 ಹಾಗೂ ಕರ್ನಾಟಕ ಪಂಚಾಯತ್ ರಾಜ್ (ಗ್ರಾಮ ಪಂಚಾಯತಿಯಿಂದ ಚರ ಹಾಗೂ ಸ್ಥಿರ ಸ್ವತ್ತುಗಳ ಆರ್ಜನೆ ಮತ್ತು ವರ್ಗಾವಣೆ) ನಿಯಮಗಳು 1996 ಮತ್ತು ಕರ್ನಾಟಕ ಪಂಚಾಯತ್ (ಗ್ರಾಮ ಪಂಚಾಯತಿ ಸಭೆಗಳ ಕಾರ್ಯವಿಧಾನ) ನಿಯಮಗಳು, 1994 ರ ನಿಯಮ 4(3) ರನ್ವಯ ಯಾವುದೇ ಪ್ರಸ್ತಾವನೆಯನ್ನು ಯಾವುದೇ ಸಾಮಾನ್ಯ ಸಭೆಯನ್ನು ಕರೆಯುವ ನೋಟೀಸಿನಲ್ಲಿ ನಮೂದಿಸಿರುವ ಹೊರತು ಅಂತಹ ಯಾವುದೇ ಸಾಮಾನ್ಯ ಸಭೆಯಲ್ಲಿ ಮತ್ತು ವಿಶೇಷ ಸಭೆಯ ಸಂಬಂಧದಲ್ಲಿ ಅಂತಹ ಸಭೆಗಿನ ಲಿಖಿತ ಕೋರಿಕೆಯಲ್ಲಿ ನಮೂದಿಸಿರುವ ಹೊರತು ಅದನ್ನು ಚರ್ಚಿಸತಕ್ಕದ್ದಲ್ಲವಾಗಿದೆ. ಪ್ರಸ್ತುತ ಪ್ರಕರಣದಲ್ಲಿ ಸಾಮಾನ್ಯ ಸಭೆಯ ಅಜೆಂಡಾದಲ್ಲಿ ಈ ವಿಷಯವು ಇಲ್ಲದಿರುವುದರಿಂದ ದಿನಾಂಕ:08–01–2016 ರಂದು ವಿಶ್ವನಾಥಪುರ ಗ್ರಾಮ ಪಂಚಾಯತಿ ಸಾಮಾನ್ಯ ಸಭೆಯಲ್ಲಿ ಸಾರ್ವಜನಿಕ ಉದ್ದೇಶಕ್ಕಾಗಿ ಮೀಸಲಿರಿಸಿದ ಸ್ವತ್ತನ್ನು ಮೆ॥ ಫೋರ್ಟಿಸ್ ಲ್ಯಾಂಡ್ ಡೆವಲಪರ್ಸ್ ರವರಿಗೆ ಕ್ಲಬ್ ಹೌಸ್ ನಿರ್ಮಿಸುವ ಉದ್ದೇಶಕ್ಕಾಗಿ ಭೋಗ್ಯಕ್ಕೆ ನೀಡಲು ಚರ್ಚಿಸಿ ನಿರ್ಣಯ

ಆಸ್ತಿಯ ಬಗ್ಗೆ ನಿರ್ಣಯ ಕೈಗೊಂಡಿರುವುದು ದುರ್ನಡತೆ ಎಸಗುವ ಪ್ರಕರಣವಾಗಿರುತ್ತದೆ.

ಗ್ರಾಮ ಪಂಚಾಯತಿ ಅಧ್ಯಕ್ಷರಾದ ಶ್ರೀ ರಾಮಮೂರ್ತಿ ಇವರು ಗ್ರಾಮ ಪಂಚಾಯತಿ ಮುಖ್ಯ ಕಾರ್ಯನಿರ್ವಾಹಕರಾಗಿದ್ದು, ಅಧಿಕಾರವನ್ನು ದುರುಪಯೋಗಪಡಿಸಿಕೊಂಡು ಕಾನೂನು ಉಲ್ಲಂಘನೆಗೆ ಕಾರಣ ಕರ್ತರಾಗಿದ್ದು ಅವರ ಮೇಲಿನ ಆಪಾದನೆ ಸಾಬೀತಾಗಿರುವ ಹಿನ್ನೆಲೆಯಲ್ಲಿ ಅವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ವಿಶ್ವನಾಥಪುರ ಗ್ರಾಮ ಪಂಚಾಯತಿ, ಅಧ್ಯಕ್ಷ ಮತ್ತು ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಲು ಮತ್ತು ಗ್ರಾಮ ಪಂಚಾಯತಿ ಉಪಾಧ್ಯಕ್ಷರು, ಸದಸ್ಯರುಗಳು ನಿರ್ಣಯಕ್ಕೆ ಸಹಿ ಮಾಡಿರುವ ಹಿನ್ನೆಲೆಯಲ್ಲಿ ಅವರಿಗೆ ಎಚ್ಚರಿಕೆ ನೀಡಲು ಸರ್ಕಾರವು ನಿರ್ಣಯಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 82 ಗ್ರಾಪಂಅ 2017, ಬೆಂಗಳೂರು, ದಿನಾಂಕ: 17-04-2018**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ರಾಮಮೂರ್ತಿ, ಅಧ್ಯಕ್ಷರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ ಇವರನ್ನು ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ, 1993 ರ ಪ್ರಕರಣ 43(ಎ) ಮತ್ತು 48(4) ರನ್ವಯ ವಿಶ್ವನಾಥಪುರ ಗ್ರಾಮ ಪಂಚಾಯತಿ, ಅಧ್ಯಕ್ಷ ಮತ್ತು ಸದಸ್ಯತ್ವ ಸ್ಥಾನದಿಂದ ತೆಗೆದುಹಾಕಿದೆ. ಸದರಿ ಗ್ರಾಮ ಪಂಚಾಯತಿಯ ಗ್ರಾಮ ಪಂಚಾಯತಿ ಉಪಾಧ್ಯಕ್ಷರು, ಸದಸ್ಯರುಗಳು ನಿರ್ಣಯಕ್ಕೆ ಸಹಿ ಮಾಡಿರುವ ಹಿನ್ನೆಲೆಯಲ್ಲಿ ಅವರಿಗೆ ಎಚ್ಚರಿಕೆ ನೀಡಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

17/4

**(ಮುಬಾರಕ್ ಅಹ್ಮದ್)**
ಉಪನಿರ್ದೇಶಕರು ಹಾಗೂ ಪದನಿಮಿತ್ತ
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಗೆ,

1. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ಗ್ರಾಮಾಂತರ ಜಿಲ್ಲಾ ಪಂಚಾಯತಿ, ಬೆಂಗಳೂರು.
2. ಕಾರ್ಯನಿರ್ವಾಹಕ ಅಧಿಕಾರಿ, ದೇವನಹಳ್ಳಿ ತಾಲ್ಲೂಕು ಪಂಚಾಯತಿ, ದೇವನಹಳ್ಳಿ, ಬೆಂಗಳೂರು ಗ್ರಾಮಾಂತರ ಜಿಲ್ಲೆ.
3. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
4. ಪಂಚಾಯತಿ ಅಭಿವೃದ್ಧಿ ಅಧಿಕಾರಿ, ಅಣ್ಣೇಶ್ವರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
5. ಶ್ರೀ ಎನ್. ರಾಮಮೂರ್ತಿ, ಅಧ್ಯಕ್ಷರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
6. ಶ್ರೀಮತಿ ರಮಾದೇವಿ, ಉಪಾಧ್ಯಕ್ಷರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
7. ಶ್ರೀಮತಿ ಜಯಮ್ಮ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
8. ಶ್ರೀ ನಾರಾಯಣಸ್ವಾಮಿ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
9. ಶ್ರೀ ಕೆ. ಸುಬ್ರಮಣಿ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
10. ಶ್ರೀ ಸಿ. ರಾಜಣ್ಣ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.

12. ಶ್ರೀಮತಿ ಲತಾ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
13. ಶ್ರೀ ಎಸ್. ನರಸಿಂಹರಾಜು, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
14. ಶ್ರೀಮತಿ ಹೆಚ್.ಎಸ್. ಆಶಾ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
15. ಶ್ರೀಮತಿ ಲಕ್ಷ್ಮಮ್ಮ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
16. ಶ್ರೀ ಕೆ. ಶ್ರೀನಿವಾಸ್, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
17. ಶ್ರೀಮತಿ ಸುನಿತಾ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
18. ಶ್ರೀ ಶಿವಣ್ಣ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
19. ಶ್ರೀಮತಿ ಪ್ರಭಾ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
20. ಶ್ರೀ ಆಶೋಕ್ ವಿ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
21. ಶ್ರೀಮತಿ ಬಿ.ಆರ್. ರಾಧಾ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
22. ಶ್ರೀಮತಿ ಶಾಂತಮ್ಮ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
23. ಶ್ರೀ ನಾರಾಯಣಸ್ವಾಮಿ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
24. ಶ್ರೀಮತಿ ವಸಂತಮ್ಮ, ಸದಸ್ಯರು, ವಿಶ್ವನಾಥಪುರ ಗ್ರಾಮ ಪಂಚಾಯತಿ, ದೇವನಹಳ್ಳಿ ತಾಲ್ಲೂಕು, ಬೆಂಗಳೂರು ಗ್ರಾಮಾಂತರ ಜಿಲ್ಲೆ.
25. ಗಣಕಕೋಶ – ಇಲಾಖಾ ವೆಬ್‌ಸೈಟ್‌ನಲ್ಲಿ ಪ್ರಕಟಿಸಲು.
26. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿ.

<u>ಪ್ರತಿಯನ್ನು ಮಾಹಿತಿಗಾಗಿ:</u>

1) ಮಾನ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಸಚಿವರ ಆಪ್ತ ಕಾರ್ಯದರ್ಶಿ, ವಿಧಾನ ಸೌಧ, ಬೆಂಗಳೂರು.
2) ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು(ಪಂ.ರಾಜ್), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.